**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರ, ಬೆಂಗಳೂರು.**

ಇಮೇಲ್: commissioner.pue@gmail.com ಫೋನ್: 080 23561944.

ಸಂಖ್ಯೆ: ಪಿಯುಇ/ಸಿಬ್ಬಂದಿ/ಸಿಆರ್-1/ಇತರೆ-01/2021-22. ದಿನಾಂಕ:27-04-2021.

## ಸುತ್ತೋಲೆ

ವಿಷಯ:- ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯನಿರ್ವಹಣೆಯ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ: 26-04-2021.

2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಡಿಇವಿ 2021 ದಿನಾಂಕ: 27-04-2021.

*****

ರಾಜ್ಯದಲ್ಲಿ ಕೋವಿಡ್-19ರ ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ: 26-04-2021 ರಲ್ಲಿ ಸರ್ಕಾರವು ಸುರಕ್ಷತಾ ದೃಷ್ಟಿಯಿಂದ ದಿನಾಂಕ 12-05-2021 ರವರೆಗೆ ಜನತಾ ಕರ್ಫ್ಯೂ ವಿಧಿಸಿ ಮಾರ್ಗಸೂಚಿಗಳನ್ನು ಬಿಡುಗಡೆಗೊಳಿಸಿದ್ದು, ಸದರಿ ಆದೇಶದ ಮಾರ್ಗ ಸೂಚಿಗಳನ್ನು ಪಾಲಿಸಲು ತಿಳಿಸಿದೆ. ಸರ್ಕಾರವು ತುರ್ತುಸೇವೆಗೆ ನಿಯೋಜಿಸುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಕಾರ್ಯ ನಿರ್ವಹಿಸಲು ಸೂಚಿಸಲಾಗಿದೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯು ದಿನಾಂಕ 24-05-2021 ರಿಂದ 16-06-2021 ರವರೆಗೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ನಡೆಸುತ್ತಿದೆ. ಸದರಿ ಪರೀಕ್ಷೆಯ ಪೂರ್ವ ಸಿದ್ಧತಾ ಕಾರ್ಯಗಳನ್ನು ನಡೆಸಬೇಕಾಗಿದೆ. ಈ ಸಂಬಂಧ ಜಿಲ್ಲಾ ಉಪ ನಿರ್ದೇಶಕರು ಕಚೇರಿಯಲ್ಲಿ ಹಾಜರಿದ್ದು ತಮ್ಮ ಕಛೇರಿಯ ಸಿಬ್ಬಂದಿಗಳಿಗೆ ತಾವು ಸೂಚಿಸುವ ಕೆಲಸವನ್ನು ನಿರ್ವಹಿಸುವಂತೆ ಕ್ರಮ ಕೈಗೊಳ್ಳುವುದು. ಅದೇ ರೀತಿ ಆಯಾ ಕಾಲೇಜಿನ ಪ್ರಾಂಶುಪಾಲರು ಪರೀಕ್ಷಾ ಕಾರ್ಯಗಳ ಅವಶ್ಯಕತೆ ಅನುಗುಣವಾಗಿ ಉಪನ್ಯಾಸಕರು ಹಾಗೂ ಸಿಬ್ಬಂದಿಗಳನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವುದು. ಜೊತೆಗೆ ಈ ಸಮಯದಲ್ಲಿ ಆಯಾ ಜಿಲ್ಲಾಧಿಕಾರಿಗಳು ಸುರಕ್ಷತೆಯ ದೃಷ್ಟಿಯಿಂದ ಸೂಚಿಸುವ ಸೂಚನೆಯ ಮೇರೆಗೆ ಕಾರ್ಯ ನಿರ್ವಹಿಸಲು ತಿಳಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ರವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು,
3. ಕಛೇರಿ ಪ್ರತಿ.